ಎಲ್.ಕೆ. ಅತೀಕ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
**L.K. Atheeq, I.A.S.,**
**Principal Secretary to Government**

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಸಂ: ಗ್ರಾಅಪ/05/ಇ-ಆಡಳಿತ/2020 ದಿನಾಂಕ:27.07.2020

ಮಾನ್ಯರೇ,

ವಿಷಯ: ಗ್ರಾಮ ಪಂಚಾಯತಿಗಳಿಂದ ವಿದ್ಯುತ್ ಶುಲ್ಕ ಪಾವತಿಗೆ ಸಂಬಂಧಿಸಿದಂತೆ ಆರ್.ಆರ್. ನಂಬರ್ ವಾರು ಎಲ್ಲಾ ವಿದ್ಯುತ್ ಸ್ಥಾವರಗಳ ಜಂಟಿ ಪರಿಶೀಲನೆ/ಲೆಕ್ಕ ಪರಿಶೋಧನೆಯನ್ನು ನಡೆಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂ:ಗ್ರಾಅಪ/05/ಇ-ಆಡಳಿತ/2020, ಭಾಗ-1, ದಿನಾಂಕ:22.07.2020.

******

ಉಲ್ಲೇಖಿತ ಸುತ್ತೋಲೆಯಂತೆ, ವಿದ್ಯುತ್ ಶುಲ್ಕ ಪಾವತಿಗೆ ಸಂಬಂಧಿಸಿದಂತೆ, ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಸಂಬಂಧಪಟ್ಟ ಎಸ್ಕಾಂ ಕಂಪನಿಯ ಅಧಿಕಾರಿಗಳು KSRSAC ರವರು ಅಭಿವೃದ್ಧಿಪಡಿಸಿರುವ Mobile app ಅನ್ನು ಆರ್.ಆರ್. ನಂಬರ್ ವಾರು ಎಲ್ಲಾ ವಿದ್ಯುತ್ ಸ್ಥಾವರಗಳ ಜಂಟಿ ಪರಿಶೀಲನೆ/ಲೆಕ್ಕ ಪರಿಶೋಧನೆಯನ್ನು ನಡೆಸಲು ಈಗಾಗಲೇ ನಿರ್ದೇಶಿಸಲಾಗಿದೆ. ಅದರಂತೆ ದಿನಾಂಕ:03.08.2020 ರಿಂದ 13.08.2020 ರವರೆಗೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಎಲ್ಲಾ ವಿದ್ಯುತ್ ಸ್ಥಾವರಗಳ ಜಂಟಿ ಲೆಕ್ಕಪರಿಶೋಧನೆ/ಪರಿಶೀಲನೆಯನ್ನು ನಡೆಸಿ ವಿದ್ಯುತ್ ಶುಲ್ಕದ ಬಾಕಿ ಮೊತ್ತವನ್ನು ಸಮನ್ವಯಗೊಳಿಸಲು ಈ ಮೂಲಕ ಸೂಚಿಸಿದೆ. ಅದರಂತೆ, ಈ ಕೆಳಕಂಡ ಕ್ರಮಗಳನ್ನು ಅನುಸರಿಸುವುದು.

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಮತ್ತು ಸಂಬಂಧಪಟ್ಟ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ ರವರು ಜಂಟಿ ಲೆಕ್ಕಪರಿಶೋಧನೆ ಕಾರ್ಯವನ್ನು ನಡೆಸಲು ಎಸ್ಕಾಂ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನೇತೃತ್ವದಲ್ಲಿ ತಂಡಗಳನ್ನು ರಚಿಸುವುದು.
2. ಎಸ್ಕಾಂ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನೇತೃತ್ವದಲ್ಲಿ ರಚಿಸಲಾದ ತಂಡಗಳಿಗೆ ಜಂಟಿ ಲೆಕ್ಕಪರಿಶೋಧನೆ ನಡೆಸಲು ವೇಳಾಪಟ್ಟಿಯನ್ನು ತಯಾರಿಸಿ, ನಿಗದಿಪಡಿಸಿದ ದಿನಾಂಕದಂದು ಜಂಟಿ ಲೆಕ್ಕಪರಿಶೋಧನೆ ನಡೆಸಲು ಸಂಬಧಪಟ್ಟ ಅಧಿಕಾರಿಗಳನ್ನು ನಿಯೋಜಿಸುವುದು.
3. ವಿದ್ಯುತ್ ಸ್ಥಾವರಗಳ ಜಂಟಿ ಲೆಕ್ಕಪರಿಶೋಧನೆಯನ್ನು ಮಾಡಲು KSRSAC ರವರು ಅಭಿವೃದ್ಧಿಪಡಿಸಿರುವ Mobile app ಮೂಲಕ ಎಲ್ಲಾ ವಿದ್ಯುತ್ ಸ್ಥಾವರಗಳನ್ನು (ಕುಡಿಯುವ ನೀರು ಸರಬರಾಜು ಮತ್ತು ಬೀದಿ ದೀಪ ಸ್ಥಾವರಗಳನ್ನು) ಮತ್ತು ವಿದ್ಯುತ್ ಸ್ಥಾವರಗಳಿಗೆ ಅಳವಡಿಸಲಾಗಿರುವ ಮೀಟರ್ ಗಳನ್ನು Geo tag ಮಾಡುವುದು ಹಾಗೂ ಆರ್. ಆರ್ ನಂಬರ್ ವಾರು ಮಾಹಿತಿಯನ್ನು Mobile app ನಲ್ಲಿ ಅಳವಡಿಸುವುದು.

ಬಹುಮಹಡಿ ಕಟ್ಟಡ, 3ನೇ ಮಹಡಿ, 3ನೇ ಗೇಟ್, ಬೆಂಗಳೂರು – 560001. M.S. Building, 3rd Floor, Gate No. 3, Bengaluru - 560 001
Tel. : 080-2235 3929 / 2203 2446 Fax : 080-2235 3927 e-mail : prsrdpr@karnataka.gov.in / principalsecretaryrdpr@gmail.com

4. ಜಂಟಿ ಲೆಕ್ಕಪರಿಶೋಧನೆ ಮಾಡುವ ಸಂದರ್ಭದಲ್ಲಿ Defunct ವಿದ್ಯುತ್ ಸ್ಥಾವರಗಳನ್ನು ವಿದ್ಯುತ್ ಬಿಲ್ಲುಗಳಿಂದ ತೆಗೆದು ಹಾಕುವ ಬಗ್ಗೆ ಲಿಖಿತ ರೂಪದಲ್ಲಿ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್, ಎಸ್ಕಾಂ ಗಳಿಗೆ ಅಧಿಕೃತ ಕೋರಿಕೆಯನ್ನು ಸಲ್ಲಿಸಿ, ಆರ್.ಆರ್. ನಂಬರ್ ಗಳನ್ನು ರದ್ದುಪಡಿಸುವ ಬಗ್ಗೆ ಸಂಬಂಧಪಟ್ಟ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡುವುದು.
5. Defunct ವಿದ್ಯುತ್ ಸ್ಥಾವರಗಳ ವಿದ್ಯುತ್ ಬಿಲ್ಲುಗಳಿಂದ ಆರ್.ಆರ್. ನಂಬರ್ ಗಳನ್ನು ರದ್ದುಪಡಿಸುವ ಬಗ್ಗೆ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್, ಎಸ್ಕಾಂ ಸಲ್ಲಿಸಲಾದ ಕೋರಿಕೆಗಳನ್ನು ಜಿಲ್ಲಾ ಹಂತದಲ್ಲಿ ಕ್ರೋಢೀಕರಿಸಿ ಸರ್ಕಾರಕ್ಕೆ ಸಲ್ಲಿಸುವುದು.
6. ಗ್ರಾಮ ಪಂಚಾಯತಿಗಳಲ್ಲಿರುವ ಅನಧಿಕೃತ / ಕ್ರಮಬದ್ಧವಲ್ಲದ ಕುಡಿಯುವ ನೀರು ಸರಬರಾಜು ಮತ್ತು ಬೀದಿ ದೀಪ ಸ್ಥಾವರಗಳನ್ನು ಕ್ರಮಬದ್ಧಗೊಳಿಸುವ ಬಗ್ಗೆ ಎಲ್ಲಾ ಗ್ರಾಮ ಪಂಚಾಯತಿರವರು ಕ್ರಮಕೈಗೊಳ್ಳಲು ನಿರ್ದೇಶಿಸುವುದು.

ಮೇಲೆ ತಿಳಿಸಲಾಗಿರುವ ಎಲ್ಲಾ ಕ್ರಮಗಳನ್ನು ದಿನಾಂಕ:03.08.2020 ಮತ್ತು 13.08.2020 ರೊಳಗೆ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಜಂಟಿ ಪರಿಶೋಧನೆ ಸಮಯದಲ್ಲಿ ಕ್ರಮಕೈಗೊಳ್ಳುವಂತೆ ಮೇಲ್ವಿಚಾರಣೆ ಮಾಡಲು ಈ ಮೂಲಕ ಸೂಚಿಸಿದೆ.

ತಮ್ಮ ವಿಶ್ವಾಸಿ,

(ಎಲ್.ಕೆ. ಅತೀಕ್. ಭಾಆಸೇ)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,ಇವರ ಆಪ್ತ ಕಾರ್ಯದರ್ಶಿಗಳು, ಇಂಧನ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಮೆಸ್ಕಾಂ, ಸೆಸ್ಕಾಂ, ಜೆಸ್ಕಾಂ, ಹೆಸ್ಕಾಂ- ಸಂಬಂಧಪಟ್ಟ ಅಧಿಕಾರಿಗಳನ್ನು ಜಂಟಿ ಲೆಕ್ಕಪರಿಶೋಧನೆ ಕಾರ್ಯಕ್ಕೆ ನಿಯೋಜಿಸುವುದು.
4. ಉಪ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
5. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
6. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು - ಕಾರ್ಯನಿರ್ವಹಣಾಧಿಕಾರಿಗಳ ಮುಖಾಂತರ.